<u>ಕರ್ನಾಟಕ ವಿಧಾನ ಪರಿಷತ್ತು</u>

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 310 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ. ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | 11-12-2024 |
| ಉತ್ತರಿಸುವ ಸಚಿವರು | ಕಂದಾಯ ಸಚಿವರು |

<table>
<tr><th>ಕ್ರ.ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ರಾಜ್ಯದ ಕಂದಾಯ ಇಲಾಖೆಯ ಅಧೀನದಲ್ಲಿ ಬರುವ ಭೂಮಾಪನ ಮತ್ತು ಭೂದಾಖಲೆಗಳ ಇಲಾಖೆಯಲ್ಲಿ ಭೂಮಾಪಕರ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಬಂದಿದೆ.</td></tr>
<tr><td>ಆ)</td><td>ಬಂದಿದ್ದಲ್ಲಿ, ಇದರಿಂದಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿದ್ದು, ಕೊರತೆಯಿರುವ ಭೂಮಾಪಕರ ನೇಮಕಾತಿಗಾಗಿ ಸರ್ಕಾರ ಈವರೆಗೂ ಕೈಗೊಂಡಿರುವ ಕ್ರಮಗಳೇನು;</td><td rowspan="3">ಭೂಮಾಪನ ಇಲಾಖೆಯಲ್ಲಿ ಖಾಲಿ ಇರುವ ಭೂಮಾಪಕರ ಹುದ್ದೆಗಳ ವಿವರ ಈ ಕೆಳಕಂಡಂತೆ ಇರುತ್ತವೆ:-<br><br><table><tr><th></th><th>ಮಂಜೂರು</th><th>ಭರ್ತಿ</th><th>ಖಾಲಿ</th></tr><tr><td>ಭೂಮಾಪಕರು</td><td>4020</td><td>3101</td><td>919</td></tr></table><br>ಈ ಪೈಕಿ ಖಾಲಿ ಇರುವ 750 ಭೂಮಾಪಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು ಸರ್ಕಾರದಿಂದ ಅನುಮತಿ ನೀಡಲಾಗಿದ್ದು, ಅದರಂತೆ, ಕರ್ನಾಟಕ ಲೋಕಸೇವಾ ಆಯೋಗವು ದಿನಾಂಕ:29-02-2024 ಮತ್ತು ದಿನಾಂಕ:22-11-2024 ರಂದು ಅಧಿಸೂಚನೆಯನ್ನು ಹೊರಡಿಸಿದ್ದು, ನೇಮಕಾತಿ ಪ್ರಕ್ರಿಯೆ ಚಾಲ್ತಿಯಲ್ಲಿರುತ್ತದೆ.<br><br>ಮುಂದುವರೆದು, ಭೂಮಾಪಕರ ಕೊರತೆಯಿಂದ ರೈತರಿಗೆ ತೊಂದರೆಯಾಗುವುದನ್ನು ತಪ್ಪಿಸಲು ಈ ಹಿಂದೆ ಕರ್ತವ್ಯ ನಿರ್ವಹಿಸುತ್ತಿರುವ ಪರವಾನಗಿ ಭೂಮಾಪಕರಗಳನ್ನು ಹೊರತುಪಡಿಸಿ 2023ರಲ್ಲಿ ಹೊಸದಾಗಿ 1200 ಪರವಾನಗಿ ಭೂಮಾಪಕರುಗಳನ್ನು ನೇಮಕಾತಿ ಮಾಡಿಕೊಳ್ಳಲಾಗಿದೆ. ಈ ಪೈಕಿ ಪ್ರತಿ ತಾಲ್ಲೂಕಿಗೆ ಪರವಾನಗಿ ಭೂಮಾಪಕರುಗಳನ್ನು ನೇಮಿಸಲಾಗಿದ್ದು, ಸದರಿ ಪರವಾನಗಿ ಭೂಮಾಪಕರುಗಳಿಂದ ಸರ್ಕಾರಿ ಆಸ್ತಿಗಳನ್ನು ಹೊರತುಪಡಿಸಿ ಇನ್ನುಳಿದ ಎಲ್ಲಾ ಪೋಡಿ ಹಾಗೂ ಇತರೆ ಪ್ರಕರಣಗಳನ್ನು ನಿರ್ವಹಿಸಲು ನಿರ್ದೇಶಿಸಲಾಗಿದೆ.</td></tr>
<tr><td>ಇ)</td><td>ಯಾವ ಕಾಲಮಿತಿಯಲ್ಲಿ ಕೊರತೆಯಿರುವ ಭೂಮಾಪಕರ ನೇಮಕಾತಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದು;</td></tr>
<tr><td>ಈ)</td><td>ಹಾಗಿದ್ದಲ್ಲಿ, ಎಷ್ಟು ಭೂಮಾಪಕರ ನೇಮಕಾತಿಯನ್ನು ಮಾಡಲು ಸರ್ಕಾರ ಉದ್ದೇಶಿಸಿದೆ; ಇಲ್ಲದಿದ್ದಲ್ಲಿ ಭೂಮಾಪಕರ ಕೊರತೆಯಿಂದಾಗಿ ರೈತರು ಮತ್ತು ಸಾರ್ವಜನಿಕರು ತೊಂದರೆ ಅನುಭವಿಸುತ್ತಿರುವುದನ್ನು ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; ಭೂಮಾಪಕರ ನೇಮಕಾತಿ ಮಾಡಲು ಸರ್ಕಾರಕ್ಕಿರುವ ತೊಂದರೆಗಳೇನು? (ಸಂಪೂರ್ಣ ವಿವರ ನೀಡುವುದು)</td></tr>
</table>

<u>ಸಂಖ್ಯೆ: ಕಂಇ 198 ಎಸ್‌ಎಸ್‌ಸಿ 2024</u>

(ಕೃಷ್ಣ ಬೈರೇಗೌಡ)
ಕಂದಾಯ ಸಚಿವರು